# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1066 |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 18-12-2024 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೋಯಿಲಾದಲ್ಲಿ ಸ್ಥಾಪಿಸಲು ಉದ್ದೇಶಿಸಿದ ಪಶುಸಂಗೋಪನೆ ಕಾಲೇಜುಗಳ ಸ್ಥಿತಿಗತಿಯೇನು; ಇಲ್ಲಿ ಯಾವ ಚಟುವಟಿಕೆಗಳು ನಡೆಯುತ್ತಿದೆ;</td><td>ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರಿನ ಅಡಿಯಲ್ಲಿ ಬರುವ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೋಯಿಲಾದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 115 ಪಅಸೇ 2012 ದಿನಾಂಕ:07.08.2012 ರಂತೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ನಿಯಮಾವಳಿ 2016 ರ ಪ್ರಕಾರ ಪಶುವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಬೇಕಾದರೆ ಅಗತ್ಯವಿರುವ ಕಟ್ಟಡ, ಮೂಲಭೂತ ಸೌಕರ್ಯ ಮತ್ತು ಸಿಬ್ಬಂದಿಗಳ ಅವಶ್ಯಕತೆ ಇರುತ್ತದೆ. ಈ ನಿಟ್ಟಿಯಲ್ಲಿ ಮೊದಲನೇ ಹಂತದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡ, ಆಸ್ಪತ್ರೆ, ಅತಿಥಿ ಗೃಹ, ವಿದ್ಯಾರ್ಥಿನಿಯರ ವಸತಿ ನಿಲಯ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯದ ಕಾಮಗಾರಿ ಪೂರ್ಣಗೊಂಡಿದ್ದು ಕರ್ನಾಟಕ ಗೃಹ ಮಂಡಳಿ ಬೆಂಗಳೂರು ವತಿಯಿಂದ ಜೂನ್ 2023 ರಲ್ಲಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರ ಮಾಡಿರುತ್ತಾರೆ. ಇನ್ನೂ ಅವಶ್ಯಕವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾರ್ಯ ಪ್ರಗತಿಯಲ್ಲಿವೆ.<br><br>ಮೊದಲನೇ ಮತ್ತು ಎರಡನೇ ವರ್ಷದ ಶೈಕ್ಷಣಿಕ ಚಟುವಟಿಕೆಗಳಿಗೆ ಅವಶ್ಯಕವಿರುವ ಕಾಮಗಾರಿಗಳ ಪೈಕಿ ಈ ಕೆಳಗಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.<br><br><table><tr><th>ಕ್ರ ಸಂ</th><th>ವಿವರ</th><th>ಮೊಬಲಗು ರೂ.ಗಳಲ್ಲಿ</th></tr><tr><td>1.</td><td>Construction of inpatient ward and cattery</td><td>7871495.00</td></tr><tr><td>2</td><td>Construction of isolation ward</td><td>3725418.00</td></tr><tr><td>3</td><td>Construction of postmortem hall/block</td><td>11177464.00</td></tr><tr><td>4</td><td>Construction of slaughter house</td><td>11007557.00</td></tr></table></td></tr>
</table>

| | | |
|---|---|---|
| 5 | Construction of small animal house phase-1 | 9593252.00 |
| 6 | Providing electrification infrastructure connected cabling at Veterinary College, Putturr | 20560436.00 |
| 7 | Providing civil works connected to cabling at Veterinary College, Koila, Puttur | 15350000.00 |

ಬಾಕಿ ಉಳಿದಿರುವ ಮತ್ತು ಎರಡನೇ ಹಂತದ ಕಾಲೇಜಿನ ಕಾಮಗಾರಿ / ಸಲಕರಣೆಗಳು / ಪೀಠೋಪಕರಣಗಳು / ಗ್ರಂಥಾಲಯ ಇತ್ಯಾದಿಗಳಿಗೆ ರೂ.163.75 (ರೂಪಾಯಿ ಒಂದು ನೂರ ಅರವತ್ಮೂರು ಕೋಟಿ ಎಪ್ಪತ್ತೈದು ಲಕ್ಷಗಳು ಮಾತ್ರ) ಗಳಿಗೆ ಆಡಳಿತಾತ್ಮಕ ಅನುಮತಿ ನೀಡಲಾಗಿದೆ.

ಮುಂದುವರೆದು, ಮೊದಲನೇ ಮತ್ತು 2ನೇ ವರ್ಷದ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಅವಶ್ಯಕವಾಗಿ ಬೇಕಾಗಿರುವ ಈ ಕೆಳಕಂಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಸಂಬಂಧ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

| ಕ್ರ ಸಂ | ವಿವರ | ಮೊಬಲಗು ರೂ.ಗಳಲ್ಲಿ |
|---|---|---|
| 1. | Ground level service reservoir (4 lakh litres capacity) | 52,58,211/- |
| 2 | External lighting/cabling/transformer/building cables/DG/Solar/High mask/Lt Panels/Feeder pillars | 5,95,23,593/- |
| 3 | Laboratory equipments | 4,50,00,000/- |
| 4 | Furnitures | 3,00,00,000/- |
| 5 | Vehicles (Bus, Tractor & Car) | 1,00,00,000/- |
| 6 | Formation of Roads & Drains | 2,50,00,000/- |
| | **Total (A)** | 17,47,81,804/- |
| B | Tender premium @ 5% on total | 87,39,090/- |
| C | Price Variation @ 5% on total | 87,39,090/- |
| D | GST @ 18% (A+B+C) | 3,14,60,725/- |
| E | Architect Fees | 62,79,291/- |
| | **GRAND TOTAL** | 23,00,00,000/- |

ಮುಂದುವರೆದು Minimum Standard for Veterinary Education-2016 ರ ಪ್ರಕಾರ ಅವಶ್ಯಕವಿರುವ ಜಾನುವಾರು ಸಾಕಾಣಿಕಾ ಘಟಕಗಳನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಅಡಿಯಲ್ಲಿ ಇರುವ ಫಾರಂಗಳನ್ನು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸುವಂತೆ ವಿಶ್ವವಿದ್ಯಾಲಯವು ಕೋರಿರುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

<table>
<tr><td></td><td></td><td>ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಅವಶ್ಯಕವಿರುವ 25 ಬೋಧಕ ಸಿಬ್ಬಂದಿಗಳನ್ನು ನೇಮಿಸಲು ಅನುಮೋದನೆ ನೀಡಲಾಗಿದೆ.<br><br>ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು 24 ವಿವಿಧ ಹುದ್ದೆಗಳಿಗೆ ಹೊರಗುತ್ತಿಗೆ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಪ್ರಕ್ರಿಯೆ ಜಾರಿಯಲ್ಲಿದೆ.</td></tr>
<tr><td>ಆ)</td><td>ರಾಜ್ಯದಲ್ಲಿ ಪಶುಸಂಗೋಪನೆ ವೈದ್ಯರ ಕೊರತೆ ಇದ್ದು, ಇದನ್ನು ನೀಗಿಸಲು ಕೈಗೊಂಡಿರುವ ಕ್ರಮಗಳೇನು;</td><td>ಇಲಾಖೆಯಲ್ಲಿ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಅರ್ಜಿ ಸಲ್ಲಿಸಲು ಅಧಿಸೂಚನೆ ಹೊರಡಿಸಲಾಗಿರುತ್ತದೆ. ನೇಮಕಾತಿ ಪ್ರಕ್ರಿಯೆ ವಿಳಂಬವಾಗುವ ಸಂಭವವಿರುವುದರಿಂದ ಪ್ರಸ್ತುತ 373 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆದೇಶ ನೀಡಲಾಗಿರುತ್ತದೆ ಹಾಗೂ ಹಾಜರಾಗದೇ ಬಾಕಿ ಉಳಿದಿರುವ ಹುದ್ದೆಗಳಿಗೆ ಮತ್ತೊಮ್ಮೆ 138 ಅಭ್ಯರ್ಥಿಗಳಿಗೆ ಹೆಚ್ಚುವರಿ ಪಟ್ಟಿಯನ್ನು ಪ್ರಕಟಿಸಿ ನೇಮಕಾತಿ ಆದೇಶ ನೀಡಲಾಗಿದೆ. ಅದರಂತೆ 264 ಗುತ್ತಿಗೆ ಪಶುವೈದ್ಯಾಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.</td></tr>
<tr><td>ಇ)</td><td>ಪಶುಸಂಗೋಪನೆ ಇಲಾಖೆಯಲ್ಲಿನ ವೈದ್ಯರುಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳೆಷ್ಟು (ವಿವರ ನೀಡುವುದು)</td><td>ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಪಶು ಆಸ್ಪತ್ರೆಗಳಲ್ಲಿ ಪಶುವೈದ್ಯರುಗಳ ವಿವರ ಈ ಕೆಳಕಂಡತಿರುತ್ತದೆ.<br><table><tr><th>ಮಂಜೂರು</th><th>ಭರ್ತಿ</th><th>ಖಾಲಿ</th></tr><tr><td>3110</td><td>1778</td><td>1332</td></tr></table></td></tr>
</table>

ಸಂಖ್ಯೆ: ಪಸಂಮೀ ಇ-382 ಪಅಸೇ 2024

(**ಕೆ.ವೆಂಕಟೇಶ್**)
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು